Akashvani: Bangalore
National Bulletin In Kannada
21.08.2026: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
21.08.2026: 13.10hrs
**********

**ಮುಖ್ಯಾಂಶಗಳು :**

1. ಜೈಪುರದಲ್ಲಿ ಬ್ರಿಕ್ಸ್ ಪ್ರವಾಸೋದ್ಯಮ ಹಾಗೂ ಪುಣೆಯಲ್ಲಿ ಬ್ರಿಕ್ಸ್ ಸಂವಹನ ಸಚಿವರ ಸಭೆ ಪ್ರಾರಂಭ
2. ಪಶ್ಚಿಮ ಬಂಗಾಳ ಪ್ರವಾಸದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ; ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ
3. ಮೈಸೂರಿನಲ್ಲಿ ಕೇಂದ್ರ ವಿಮಾನಯಾನ ಸಚಿವಾಲಯದ ಸಂಸದೀಯ ಸಲಹಾ ಸಮಿತಿ ಸಭೆ ಆರಂಭ
4. ಇರಾನ್‌ನ ಜಲಮಾರ್ಗಗಳ ಮೇಲೆ ಶೀಘ್ರದಲ್ಲೇ ಅಮೆರಿಕಾ ನಿಯಂತ್ರಣ - ಡೊನಾಲ್ಡ್ ಟ್ರಂಪ್
5. ಬಿಡಬ್ಲ್ಯುಎಫ್ ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್; ಪುರುಷರ ಮತ್ತು ಮಹಿಳೆಯರ ಡಬಲ್ಸ್ ಕ್ವಾರ್ಟರ್‌ಫೈನಲ್‌ನಲ್ಲಿ ಭಾರತ ಹೋರಾಟ

**********

ಬ್ರಿಕ್ಸ್ ಪ್ರವಾಸೋದ್ಯಮ ಸಚಿವರ ಸಭೆಯು ಭಾರತದ ಅಧ್ಯಕ್ಷತೆಯಲ್ಲಿ ಇಂದು ಜೈಪುರದಲ್ಲಿ ಆರಂಭವಾಗಿದೆ. ಪ್ರವಾಸೋದ್ಯಮ ಕ್ಷೇತ್ರದಲ್ಲಿ ಸಹಕಾರವನ್ನು ಬಲಪಡಿಸುವತ್ತ ಕೇಂದ್ರೀಕರಣಗೊಂಡಿರುವ ಎರಡು ದಿನಗಳ ಸಭೆಯಲ್ಲಿ ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಪ್ರವಾಸೋದ್ಯಮ ಸಚಿವರು ಮತ್ತು ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಚರ್ಚೆಯ ಪ್ರಮುಖ ಕ್ಷೇತ್ರಗಳು ಸುಸ್ಥಿರ ಮತ್ತು ಜವಾಬ್ದಾರಿಯುತ ಪ್ರವಾಸೋದ್ಯಮ ಎಂಬುದಾಗಿದೆ. ಕೌಶಲ್ಯಾಭಿವೃದ್ಧಿ, ತಡೆರಹಿತ ಪ್ರಯಾಣ ಮತ್ತು ಪ್ರವಾಸೋದ್ಯಮದಲ್ಲಿ ತಂತ್ರಜ್ಞಾನ ಹಾಗೂ ಕೃತಕ ಬುದ್ಧಿಮತ್ತೆಯ ಬಳಕೆ, ಮತ್ತಿತರೆ ವಿಷಯಗಳು ಸೇರಿವೆ.

**********

೧೨ ನೇ ಬ್ರಿಕ್ಸ್ ಸಂವಹನ ಸಚಿವರ ಸಭೆಯನ್ನು ಭಾರತ ಆಯೋಜಿಸಿದ್ದು, ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರ ಅಧ್ಯಕ್ಷತೆಯಲ್ಲಿಂದು ಪುಣೆಯಲ್ಲಿ ಸಭೆ ಆರಂಭವಾಗಿದೆ. ಸಚಿವ ಜ್ಯೋತಿರಾಧಿತ್ಯ ಸಿಂಧಿಯಾ ಸಭೆಯನ್ನು ಉದ್ಘಾಟಿಸಿದರು. ಮಾಹಿತಿ ಮತ್ತು ಸಂವಹನ ತಂತ್ರಜ್ಞಾನ, ಡಿಜಿಟಲ್ ರೂಪಾಂತರ, ನಾವೀನ್ಯತೆ ಮತ್ತು  ಡಿಜಿಟಲ್ ಮೂಲಸೌಕರ್ಯದಲ್ಲಿ ಸಹಕಾರವನ್ನು ಬಲಪಡಿಸುವ ಕುರಿತು ಚರ್ಚೆ ನಡೆಯಲಿದೆ. ನಾವೀನ್ಯತೆ, ಸಹಕಾರ ಮತ್ತು ರೂಪಾಂತರ ಎಂಬುದು ಸಭೆಯ ಪ್ರಮುಖ ಕಾರ್ಯಸೂಚಿಯಾಗಿದೆ. ಈ ಕಾರ್ಯಕ್ರಮವು ಬ್ರಿಕ್ಸ್ ಸದಸ್ಯ ರಾಷ್ಟ್ರಗಳು ಉದಯೋನ್ಮುಖ ತಂತ್ರಜ್ಞಾನ, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ಭವಿಷ್ಯದ ಸಂಪರ್ಕ ವ್ಯವಸ್ಥೆ, ಸೈಬರ್ ಭದ್ರತೆ, ಸಾಮರ್ಥ್ಯ ವೃದ್ಧಿ ಮತ್ತು ಅಂತರ್ಗತ ಡಿಜಿಟಲ್ ಸಂಪರ್ಕದ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ವೇದಿಕೆಯನ್ನು ಒದಗಿಸುತ್ತದೆ.

**********

ಪಶ್ಚಿಮ ಬಂಗಾಳಕ್ಕೆ ಮೂರು ದಿನಗಳ ಭೇಟಿಗಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ನಿನ್ನೆ ಸಂಜೆ ಬಾಗ್ಡೋಗ್ರಾಕ್ಕೆ ಆಗಮಿಸಿದರು. ಅವರನ್ನು ಮುಖ್ಯಮಂತ್ರಿ ಸುವೇಂದು ಅಧಿಕಾರಿ, ಡಾರ್ಜಿಲಿಂಗ್ ಸಂಸದ ರಾಜು ಬಿಸ್ತಾ ಮತ್ತು ಪ್ರವಾಸೋದ್ಯಮ ಸಚಿವ ಶಂಕರ್ ಘೋಷ್ ಇತರರು ಬಾಗ್ಡೋಗ್ರಾ ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಂಡರು. "ಕೇಂದ್ರ ಗೃಹ ಸಚಿವರು ಇಂದು ಸಿಲಿಗುರಿಯಲ್ಲಿ ಸರಣಿ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಅವರು ಸಶಸ್ತ್ರ ಸೀಮಾ ಬಲ್ ಅಥವಾ ಎಸ್‌ಎಸ್‌ಬಿಯ ಪ್ರಧಾನ ಕಚೇರಿಯಲ್ಲಿ ಹಲವಾರು ಯೋಜನೆಗಳಿಗೆ ಅಡಿಪಾಯ ಹಾಕಲಿದ್ದಾರೆ. ಸಿಲಿಗುರಿ ಕಾರಿಡಾರ್ ಕುರಿತ ಎರಡು ಸಭೆಗಳಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ, ಕೇಂದ್ರ ಗೃಹ ಸಚಿವರು ಕವಾಖಾಲಿ ಮೈದಾನದಲ್ಲಿ ಭಾರತೀಯ ನ್ಯಾಯ ಸಂಹಿತಾ ಅಥವಾ ಬಿಎನ್‌ಎಸ್ ಕುರಿತು ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ.

**********

ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಆಯೋಜಿಸಿರುವ ಸಂಸದೀಯ ಸಲಹಾ ಸಮಿತಿಯ ಸಭೆ ಕೇಂದ್ರ ವಿಮಾನಯಾನ ಸಚಿವ ಕಿಂಜರಾಪು ರಾಮ್ ಮೋಹನ್ ನಾಯ್ಡು ಅವರ ಅಧ್ಯಕ್ಷತೆಯಲ್ಲಿ ನಡೆಯುತ್ತಿದ್ದು, ಸಭೆಯಲ್ಲಿ ಸಂಸತ್ ಸದಸ್ಯರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದಾರೆ.

**********

ಸಿಂಗಾಪುರ ಮತ್ತು ಏಷ್ಯಾದಾದ್ಯಂತ ಆರ್ಥಿಕ ಪಾಲುದಾರಿಕೆಯನ್ನು ಗಾಢವಾಗಿಸುವ ನಿಟ್ಟಿನಲ್ಲಿ ಭಾರತ ಬದ್ಧತೆ ಹೊಂದಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಒತ್ತಿ ಹೇಳಿದ್ದಾರೆ. ಸಿಂಗಾಪುರದಲ್ಲಿ ಭಾರತೀಯ ಉದ್ದಿಮೆದಾರರನ್ನುದ್ದೇಶಿಸಿ ಮಾತನಾಡಿದ ಸಚಿವರು, ಏಷ್ಯಾದಾದ್ಯಂತ ಭಾರತ ಉತ್ತಮ ಪಾಲುದಾರಿಕೆ ಹೊಂದಲು ಆಸಕ್ತವಾಗಿದೆ ಎಂದರು. ಗೋಯಲ್ ಅವರು ಸಿಂಗಾಪುರದ ವಿದೇಶಾಂಗ ವ್ಯವಹಾರಗಳು, ವ್ಯಾಪಾರ ಮತ್ತು ಕೈಗಾರಿಕೆಗಳ ರಾಜ್ಯ ಸಚಿವ ಗಾನ್ ಸಿಯೋವ್ ಹುವಾಂಗ್ ಹಾಗೂ ಇತರ ಗಣ್ಯರನ್ನು ಈ ಸಂದರ್ಭದಲ್ಲಿ ಭೇಟಿ ಮಾಡಿದರು.

**********

ಇರಾನ್ ನೊಂದಿಗೆ ಸಂಪರ್ಕ ಹೊಂದಿರುವ ಕಾರ್ಯತಂತ್ರದ ಜಲಮಾರ್ಗಗಳನ್ನು ಅಮೆರಿಕ "ಮೂಲಭೂತವಾಗಿ ನಿಯಂತ್ರಿಸುತ್ತಿದೆ" ಮತ್ತು ಶೀಘ್ರದಲ್ಲೇ ಸಂಪೂರ್ಣವಾಗಿ ನಿಯಂತ್ರಣಕ್ಕೆ ತೆಗೆದುಕೊಳ್ಳಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಆದರೆ ಟೆಹ್ರಾನ್‌ಗೆ ಪರಮಾಣು ಶಸ್ತ್ರಾಸ್ತ್ರವನ್ನು ಪಡೆಯಲು ಎಂದಿಗೂ ಅವಕಾಶ ನೀಡುವುದಿಲ್ಲ ಎಂದು ಪುನರುಚ್ಚರಿಸಿದ್ದಾರೆ. ಖಾಸಗಿ ರೇಡಿಯೋ ವಾಹಿನಿಗೆ ನೀಡಿದ ಸಂದರ್ಶನದಲ್ಲಿ ಟ್ರಂಪ್, ಇರಾನ್ ವಿರುದ್ಧದ ಅಮೆರಿಕದ ಮಿಲಿಟರಿ ಕ್ರಮವನ್ನು ಸಮರ್ಥಿಸಿಕೊಂಡರು ಮತ್ತು ಸಂಘರ್ಷದ ಪರಿಣಾಮವಾಗಿ ಅಮೆರಿಕನ್ನರು ಹೆಚ್ಚಿನ ಪೆಟ್ರೋಲ್ ಹಾಗೂ ಇಂಧನ ವೆಚ್ಚಗಳನ್ನು ಎದುರಿಸಬಹುದು ಎಂಬುದನ್ನು ಒಪ್ಪಿಕೊಂಡಿದ್ದಾರೆ. ಇರಾನ್ ಪರಮಾಣು ಶಸ್ತ್ರಾಸ್ತ್ರವನ್ನು ಅಭಿವೃದ್ಧಿಪಡಿಸಲು ಎಂದಿಗೂ ಅವಕಾಶ ನೀಡುವುದಿಲ್ಲ. ಇರಾನ್‌ನ ಮಿಲಿಟರಿ ಶಕ್ತಿ ನಾಶವಾಗಿದೆ ಮತ್ತು ಕ್ಷಿಪಣಿಗಳು ಹಾಗೂ ಡ್ರೋನ್‌ಗಳನ್ನು ಉತ್ಪಾದಿಸುವ ಹೆಚ್ಚಿನ ಸಾಮರ್ಥ್ಯವನ್ನು ಕಳೆದುಕೊಂಡಿದೆ ಎಂದು ಅವರು ಹೇಳಿದ್ದಾರೆ.

**********

ಕೇಂದ್ರ ಸರ್ಕಾರದ ಕನಿಷ್ಠ ಬೆಂಬಲ ಬೆಲೆಯ ಪ್ರಯೋಜನಗಳು ಸಣ್ಣ ಮತ್ತು ಅತಿ ಸಣ್ಣ ರೈತರು ಸೇರಿದಂತೆ ಎಲ್ಲಾ ರೈತರಿಗೆ ತಲುಪುವಂತೆ ಸರ್ಕಾರ ಹಲವಾರು ಉಪಕ್ರಮಗಳನ್ನು ಕೈಗೊಂಡಿದೆ. ಪ್ರಧಾನ ಮಂತ್ರಿ ಅನ್ನದಾತ ಸಂರಕ್ಷಣ್ ಅಭಿಯಾನ- PM AASHA ಗ್ರಾಹಕರಿಗೆ ಬೆಲೆ ಸ್ಥಿರತೆಯನ್ನು ಕಾಯ್ದುಕೊಳ್ಳುವುದರೊಂದಿಗೆ ರೈತರಿಗೆ ಲಾಭದಾಯಕ ಬೆಲೆಗಳನ್ನು ಖಚಿತಪಡಿಸಿಕೊಳ್ಳಲು ಈ ಯೋಜನೆಯನ್ನು ೨೦೧೮ ರ ಸೆಪ್ಟೆಂಬರ್ ನಲ್ಲಿ ಪ್ರಾರಂಭಿಸಲಾಯಿತು.

ಈ ಯೋಜನೆಯಡಿಯಲ್ಲಿ, ಬಜೆಟ್ ಹಂಚಿಕೆಯು ವರ್ಷಗಳಲ್ಲಿ ಸ್ಥಿರವಾಗಿ ಹೆಚ್ಚಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ತಿಳಿಸಿದೆ.

೨೦೨೪-೨೫ ರಲ್ಲಿ, ಯೋಜನೆಯಡಿಯಲ್ಲಿ ವಾಸ್ತವಿಕ ವೆಚ್ಚವು ಸುಮಾರು ಐದು ಸಾವಿರದ ೪೦೦ ಕೋಟಿ ರೂಪಾಯಿಗಳಾಗಿದ್ದು, ಇದನ್ನು ೨೦೨೬-೨೭ ರಲ್ಲಿ ಏಳು ಸಾವಿರ ಕೋಟಿ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. ಇದು ರೈತರಿಗೆ ಆದಾಯ ಬೆಂಬಲವನ್ನು ಖಚಿತಪಡಿಸಿಕೊಳ್ಳುವ ಮತ್ತು ಬೆಲೆ ಭರವಸೆ ಕಾರ್ಯವಿಧಾನಗಳನ್ನು ಬಲಪಡಿಸುವ ಸರ್ಕಾರದ ಗಮನವನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವಾಲಯ ಹೇಳಿದೆ.

**********

ದೆಹಲಿ ಸೈಬರ್ ಘಟಕದ ಪೊಲೀಸರು ಅಂತರರಾಜ್ಯ ಡಿಜಿಟಲ್ ಸೈಬರ್-ವಂಚನಾ ಜಾಲವನ್ನು ಭೇದಿಸಿದ್ದಾರೆ. ಪಂಜಾಬ್ ಮತ್ತು ರಾಜಸ್ಥಾನದ ನಾಲ್ವರು ಆರೋಪಿಗಳನ್ನು ಬಂಧಿಸಿದೆ. ನಿವೃತ್ತ ಭಾರತೀಯ ಸೇನಾ ಕರ್ನಲ್ ಒಬ್ಬರಿಗೆ ೧೫ ಲಕ್ಷ ರೂಪಾಯಿಗಳಿಗೂ ಹೆಚ್ಚು ವಂಚನೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಇವರನ್ನು ಬಂಧಿಸಲಾಗಿದೆ. ಕೋಟ್ಯಂತರ ಮೌಲ್ಯದ ವಹಿವಾಟುಗಳನ್ನು ಒಳಗೊಂಡ ಬಹು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ೧೭ ದೂರುಗಳಿಗೆ ಸಂಬಂಧಿಸಿದಂತೆ ಆರೋಪಿಗಳ ವಿಚಾರಣೆ ನಡೆಯುತ್ತಿದೆ. ಅಪರಾಧದಲ್ಲಿ ಬಳಸಲಾಗಿದೆ ಎನ್ನಲಾದ ನಾಲ್ಕು ಸ್ಮಾರ್ಟ್‌ಫೋನ್‌ಗಳು ಮತ್ತು ಆರು ಸಿಮ್ ಕಾರ್ಡ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

**********

ಮಹರ್ಷಿ ವಾಲ್ಮೀಕಿ ಹಗರಣದಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ ಸಚಿವ ಬಿ.ನಾಗೇಂದ್ರ ಅವರನ್ನು ಸಂಪುಟದಿಂದ ವಜಾಗೊಳಿಸುವಂತೆ ಒತ್ತಾಯಿಸಿ, ಬಿಜೆಪಿ ಮತ್ತು ಜೆಡಿಎಸ್ ನಾಯಕರು ಶಾಸಕರ ಭವನದ ವಾಲ್ಮೀಕಿ ಪ್ರತಿಮೆ ಮುಂಭಾಗ ಪ್ರತಿಭಟನೆ ನಡೆಸಿದರು. ಕಪ್ಪು ಬಟ್ಟೆ ಧರಿಸಿ ಪ್ರತಿಭಟನೆ ನಡೆಸಿದ ನಾಯಕರು ನಂತರ ವಿಧಾನಸೌಧ ಪ್ರವೇಶಿಸಲು ಯತ್ನಿಸಿದಾಗ, ಪೊಲೀಸರು ಪ್ರವೇಶ ದ್ವಾರದಲ್ಲಿ ತಡೆದರು. ಕಪ್ಪು ಬಟ್ಟೆ ಧರಿಸಿ ಸದನಕ್ಕೆ ಆಗಮಿಸಬಾರದು ಎಂದು ಮನವಿ ಮಾಡಿದರು. ಬಳಿಕ ವಿಧಾನಸೌಧ ಹಾಗೂ ವಿಧಾನಸಭೆಯನ್ನು ಪ್ರವೇಶಿಸಿ ಸರ್ಕಾರದ ವಿರುದ್ಧ ಘೋಷಣೆಯನ್ನು ಕೂಗಿದರು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿ, ಬಿ.ನಾಗೇಂದ್ರ ರಾಜೀನಾಮೆ ನೀಡುವವರೆಗೂ ನಮ್ಮ ಹೋರಾಟ ನಿಲ್ಲುವುದಿಲ್ಲ ಎಂದರು. ವಿಧಾನಸಭೆಯ ವಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ವಾಲ್ಮೀಕಿ ನಿಗಮದ ಹಗರಣದಿಂದ ಹಿಂದುಳಿದ ಸಮುದಾಯಕ್ಕೆ

ಭಾರಿ ಅನ್ಯಾಯವಾಗಿದೆ. ಮನಸೊ ಇಚ್ಚೆ ಸರ್ಕಾರದ ಹಣವನ್ನು ಖಾತೆಗಳಿಗೆ ವರ್ಗಾವಣೆ ಮಾಡಲಾಗಿದೆ ಎಂದು ಆರೋಪಿಸಿದರು.

**********

ನವದೆಹಲಿಯಲ್ಲಿ ನಡೆಯುತ್ತಿರುವ ಬಿಡಬ್ಲ್ಯುಎಫ್ ವಿಶ್ವ ಚಾಂಪಿಯನ್‌ಶಿಪ್ ಬ್ಯಾಡ್ಮಿಂಟನ್ ೨೦೨೬ರ ಪುರುಷರ ಮತ್ತು ಮಹಿಳೆಯರ ಡಬಲ್ಸ್ ಕ್ವಾರ್ಟರ್‌ಫೈನಲ್‌ನಲ್ಲಿ ಭಾರತೀಯ ಆಟಗಾರರು ಇಂದು ಕಣಕ್ಕಿಳಿಯಲಿದ್ದಾರೆ. ಪುರುಷರ ಡಬಲ್ಸ್‌ನಲ್ಲಿ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಚೀನಾದ ೩ನೇ ಶ್ರೇಯಾಂಕದ ಲಿಯಾಂಗ್ ವೇ ಕೆಂಗ್ ಮತ್ತು ವಾಂಗ್ ಚಾಂಗ್ ಅವರನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೧.೫೦ಕ್ಕೆ ಪ್ರಾರಂಭವಾಗಲಿದೆ.

**********

ಆಮ್ಸ್ಟೆಲ್ವೀನ್‌ನಲ್ಲಿ ನಡೆಯುತ್ತಿರುವ ಎಫ್‌ಐಎಚ್ ವಿಶ್ವಕಪ್ ಹಾಕಿ ಟೂರ್ನಿಯ ಪೂಲ್ ಬಿ ಗುಂಪಿನ ಮೊದಲ ಪಂದ್ಯದಲ್ಲಿ ಭಾರತೀಯ ಮಹಿಳಾ ತಂಡವು ಇಂದು ನೆದರ್ಲ್ಯಾಂಡ್ಸ್ ವಿರುದ್ಧ ಸೆಣಸಲಿದೆ. ಈ ಪಂದ್ಯವು ಭಾರತೀಯ ಕಾಲಮಾನ ರಾತ್ರಿ ೮:೩೦ ಕ್ಕೆ ಆರಂಭವಾಗಲಿದೆ. ಇದಕ್ಕೂ ಮೊದಲು, ನಿನ್ನೆ ನಡೆದ ಪೂಲ್ ಡಿ ಗುಂಪಿನ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಗೋಲುರಹಿತ ಡ್ರಾ ಸಾಧಿಸಿದ ನಂತರ ಭಾರತ ಎರಡನೇ ಸುತ್ತಿಗೆ ಮುನ್ನಡೆದಿದೆ. ಎರಡೂ ತಂಡಗಳು ಅವಕಾಶಗಳನ್ನು ಸೃಷ್ಟಿಸಿಕೊಂಡವು. ಆದರೆ ಗೋಲು ಗಳಿಸುವಲ್ಲಿ ವಿಫಲವಾದವು.

**********

ಇಂದು ಕೇರಳದ ಕರಾವಳಿ ಪ್ರದೇಶಗಳಲ್ಲಿ ಸಮುದ್ರದ ಅಲೆಗಳು ಹೆಚ್ಚಾಗಿದ್ದು, ಅವು ತೀವ್ರ ಸ್ವರೂಪ ಪಡೆಯುವ ಸಾಧ್ಯತೆ ಇದೆ. ತಿರುವನಂತಪುರಂ, ಕೊಲ್ಲಂ, ಆಲಪ್ಪುಳ, ಎರ್ನಾಕುಲಂ, ಮಲಪ್ಪುರಂ, ಕೋಝಿಕ್ಕೋಡ್, ಕಣ್ಣೂರು ಮತ್ತು ಕಾಸರಗೋಡು ಕರಾವಳಿಯಲ್ಲಿ ೧ ರಿಂದ ೧.೫ ಮೀಟರ್ ಎತ್ತರದ ಅಲೆಗಳು ಇಂದು ಏಳಬಹುದು ಎಂದು ರಾಷ್ಟ್ರೀಯ ಸಾಗರ ಮಾಹಿತಿ ಸೇವೆಗಳ ಕೇಂದ್ರ ಎಚ್ಚರಿಸಿದೆ.

*****END*****